**Akashvani : Bangalore**
**Regional Bulletin In Kannada**
**07.03.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**07.03.2026 / 18.40 hrs**

**<><*<><>*><>**

ಮುಖ್ಯಾಂಶಗಳು

೧. ಮುಂದಿನ ವರ್ಷಾಂತ್ಯದೊಳಗೆ ದೇಶವನ್ನು ಎಚ್‌ಐವಿ ಮುಕ್ತಗೊಳಿಸಲು ಕೇಂದ್ರ ಸರ್ಕಾರದ ಕ್ರಮ ; ಆದ್ಯತಾ ವಲಯದಲ್ಲಿ ರಾಜ್ಯದ ೨೭ ಜಿಲ್ಲೆಗಳು

೨. ಬೆಂಗಳೂರಿನ ವಾಯುಪಡೆ ತಾಂತ್ರಿಕ ಕಾಲೇಜಿನಲ್ಲಿ ಪಾಸಿಂಗ್ ಔಟ್ ಪರೇಡ್ ; ೧೦೮ ಇಂಜಿನಿಯರಿಂಗ್ ಅಧಿಕಾರಿಗಳಿಗೆ ಪದವಿ ಪ್ರದಾನ

೩. ಮಕ್ಕಳ ಹಕ್ಕು ಸಂರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯ ; ನ್ಯಾಯಮೂರ್ತಿ ಜಯಂತ್ ಬ್ಯಾನರ್ಜಿ

೪. ಕಲಬುರಗಿ ಐಟಿಎಫ್ ಡಬ್ಲ್ಯು-೩೫ ಮಹಿಳಾ ಟೆನಿಸ್ ; ವೈಷ್ಣವಿ ಅಡ್ಕರ್-ಅಂಕಿತಾ ರೈನಾ ಜೋಡಿಗೆ ಡಬಲ್ಸ್ ಪ್ರಶಸ್ತಿ

**<><*<><>*><>**

ಮುಂದಿನ ವರ್ಷಾಂತ್ಯದ ಒಳಗೆ ದೇಶವನ್ನು ಎಚ್‌ಐವಿ ಮುಕ್ತಗೊಳಿಸಲಾಗುವುದು ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಹಾಗೂ ರಾಷ್ಟ್ರೀಯ ಏಡ್ಸ್ ನಿಯಂತ್ರಣ ಸಂಸ್ಥೆ-ನ್ಯಾಕೊ ಮಹಾನಿರ್ದೇಶಕ ಡಾ. ರಾಕೇಶ್ ಗುಪ್ತಾ ಹೇಳಿದ್ದಾರೆ. ಅವರು, 'ಮಿಷನ್ ಏಡ್ಸ್ ಸುರಕ್ಷಾ' ಯೋಜನೆಯ ಭಾಗವಾಗಿ, ರಾಷ್ಟ್ರೀಯ ಏಡ್ಸ್ ನಿಯಂತ್ರಣ ಸಂಸ್ಥೆಯು ಬೆಂಗಳೂರಿನಲ್ಲಿ ಇಂದು ಆಯೋಜಿಸಿದ್ದ 'ಸುರಕ್ಷಾ ಸಂಕಲ್ಪ ಕಾರ್ಯಗಾರ'ವನ್ನು ಉದ್ದೇಶಿಸಿ ಮಾತನಾಡಿದರು. ಕರ್ನಾಟಕದ ೩೧ ಜಿಲ್ಲೆಗಳಲ್ಲಿ ಈ ಮಿಷನ್ ಜಾರಿಯಲ್ಲಿದ್ದರೂ, ೨೭ ಜಿಲ್ಲೆಗಳನ್ನು ಹೆಚ್ಚಿನ ಆದ್ಯತೆಯ ಜಿಲ್ಲೆಗಳೆಂದು ಗುರುತಿಸಲಾಗಿದೆ. ರಾಜ್ಯದ ಎಚ್‌ಐವಿ ಸ್ಥಿತಿಗತಿ ಬಗ್ಗೆ ವಿಶೇಷ ಗಮನ ಹರಿಸಲಾಗುತ್ತಿದೆ. ರಾಜ್ಯದಲ್ಲಿ ಎಚ್‌ಐವಿ ಪ್ರಸ್ತುತತೆ ಶೇಕಡಾ ೦.೪೪ ರಷ್ಟಿದ್ದು, ಇದು ರಾಷ್ಟ್ರೀಯ ಸರಾಸರಿಯಾದ ಶೇಕಡಾ ೦.೨ ಗಿಂತ ಹೆಚ್ಚಾಗಿದೆ. ರಾಜ್ಯದಲ್ಲಿ ಸುಮಾರು ೨ ಲಕ್ಷ ೯೧ ಸಾವಿರ ಜನರು ಎಚ್‌ಐವಿ ಸೋಂಕಿನೊಂದಿಗೆ ಜೀವಿಸುತ್ತಿದ್ದಾರೆ. ವಾರ್ಷಿಕ ಸುಮಾರು ೪ ಸಾವಿರದ ೭೦೦ ಹೊಸ ಎಚ್‌ಐವಿ ಪ್ರಕರಣಗಳು ಪತ್ತೆಯಾಗುತ್ತಿವೆ ಎಂದು ಮಾಹಿತಿ ನೀಡಿದರು.

ಧ್ವನಿ: ಡಾ.ರಾಕೇಶ್ ಗುಪ್ತಾ (೩೧ ಸೆಕೆಂಡ್‌ಗಳು)

ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ್ ಗುಪ್ತಾ ಮಾತನಾಡಿ, ರಾಜ್ಯದಲ್ಲಿ ಎಚ್‌ಐವಿ ನಿಯಂತ್ರಣ ಕಾರ್ಯಕ್ರಮಗಳಿಗೆ ಹೊಸ ರೂಪ ನೀಡಲಾಗಿದೆ. ಮುಂದಿನ ೬ ತಿಂಗಳೊಳಗೆ ಮಹತ್ವದ ಫಲಿತಾಂಶ ಸಾಧಿಸಲು ಗುರಿ ಸಾಧನೆ ಮಾಡುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

ಧ್ವನಿ : ಹರ್ಷ ಗುಪ್ತಾ (೩೦ ಸೆಕೆಂಡ್‌ಗಳು)

ರಾಜ್ಯದ ಜಿಲ್ಲೆಗಳನ್ನು ಮೂರು ಹಂತಗಳಾಗಿ ವಿಂಗಡಿಸಲಾಗಿದೆ. ಕಡಿಮೆ ಕಾರ್ಯಕ್ಷಮತೆ ಹೊಂದಿರುವ 'ಹಂತ-೩' ಜಿಲ್ಲೆಗಳತ್ತ ವಿಶೇಷ ಗಮನ ಹರಿಸಲಾಗುವುದು. ಎಂದು ತಿಳಿಸಿದರು. ಕಾರ್ಯಾಗಾರದಲ್ಲಿ ಕೆಎಸ್‌ಎಪಿಎಸ್ ನ ರಾಜ್ಯ ನಿರ್ದೇಶಕ ಪದ್ಮ ಬಸವಂತಪ್ಪ, ವಿವಿಧ ಜಿಲ್ಲೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಮಿಳುನಾಡು ಹಾಗೂ ನಾಗಪುರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

<><*<><>*><>

ಇಂದು ಜನೌಷಧಿ ದಿನ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರಧಾನಮಂತ್ರಿ ಭಾರತೀಯ ಜನೌಷಧಿ ಯೋಜನೆಯಿಂದ ಸುಮಾರು ೧೮ ಸಾವಿರಕ್ಕೂ ಅಧಿಕ ಜನೌಷಧಿ ಕೇಂದ್ರಗಳು ಬಡಜನರಿಗೆ ಕೈಗೆಟಕುವ ದರದಲ್ಲಿ ಔಷಧಿ ಅಗತ್ಯಗಳನ್ನು ಪೂರೈಸುತ್ತಿವೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ರಾಜ್ಯದ ವಿವಿಧೆಡೆ ಜನೌಷಧಿ ಸಪ್ತಾಹವನ್ನು ಆಚರಿಸಲಾಯಿತು. ಧಾರವಾಡ ಜಿಲ್ಲೆಯಲ್ಲಿ ವಿಶೇಷ ಶಿಬಿರ, ಕಾರ್ಯಕ್ರಮಗಳನ್ನು ವ್ಯವಸ್ಥೆ ಮಾಡಲಾಗಿತ್ತು. ಶಿಬಿರಗಳಲ್ಲಿ ಆರೋಗ್ಯ ತಪಾಸಣೆ, ಸ್ಥಳದಲ್ಲೇ ರೋಗನಿರ್ಣಯ, ಉಚಿತ ಸಮಾಲೋಚನೆ ಮತ್ತು ಜನೌಷಧಿ ಔಷಧಿಗಳ ವ್ಯಾಪಕ ವಿತರಣೆ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಕುರಿತು ಹೆಚ್ಚಿನ ಮಾಹಿತಿ ನೀಡಿದ್ದಾರೆ ಪ್ರಧಾನಮಂತ್ರಿ ಜನ ಔಷಧಿ ಕೇಂದ್ರದ ಉತ್ತರ ಕರ್ನಾಟಕದ ಅಧ್ಯಕ್ಷ, ಪವನ ಜೋಶಿ.

**ಧ್ವನಿ : ಪವನ ಜೋಶಿ (೨೮ ಸೆಕೆಂಡ್‌ಗಳು)**

<><*<><>*><>

ನಿರಂತರವಾಗಿ ಬದಲಾಗುತ್ತಿರುವ ತಾಂತ್ರಿಕ ವಾತಾವರಣದಲ್ಲಿ ವಾಯುಪಡೆಯ ಯುವ ಅಧಿಕಾರಿಗಳು ತಮ್ಮ ಜ್ಞಾನ ಹಾಗೂ ಕೌಶಲ್ಯಗಳನ್ನು ನಿರಂತರವಾಗಿ ನವೀಕರಿಸಿಕೊಳ್ಳಬೇಕು ಎಂದು ಏರ್ ಮಾರ್ಷಲ್ ಸಂಜೀವ್ ಘುರಾಟಿಯಾ ಕರೆ ನೀಡಿದ್ದಾರೆ. ಅವರು, ಬೆಂಗಳೂರಿನಲ್ಲಿರುವ ವಾಯುಪಡೆ ತಾಂತ್ರಿಕ ಕಾಲೇಜಿನಲ್ಲಿಂದು ತಾಂತ್ರಿಕ ಅಧಿಕಾರಿಗಳ ಪದವಿ ಪರೇಡ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ಸೌಹಾರ್ದ ದೇಶಗಳ ೯ ಅಧಿಕಾರಿಗಳು ಸೇರಿದಂತೆ ಒಟ್ಟು ೧೦೮ ಇಂಜಿನಿಯರಿಂಗ್ ಅಧಿಕಾರಿಗಳು ಪದವಿ ಪಡೆದರು. ಈ ಸಂದರ್ಭದಲ್ಲಿ ವಾಯುಪಡೆಯ 'ಏರ್ ಡೆವಿಲ್ಸ್' ತಂಡದಿಂದ ಅದ್ಭುತವಾದ ಫ್ಲೈಪಾಸ್ಟ್ ಮತ್ತು ಮೋಡಿಮಾಡುವ ಸ್ಕೈ ಡೈವಿಂಗ್ ಪ್ರದರ್ಶನ ಹಾಗೂ 'ಏರ್ ವಾರಿಯರ್ ಡ್ರಿಲ್ ತಂಡದಿಂದ ಪ್ರದರ್ಶನಗಳು ನಡೆದವು.

<><*<><>*><>

ಮಕ್ಕಳ ಬದುಕಿನ ಹಕ್ಕು ಸಂರಕ್ಷಿಸಿ ಉತ್ತಮ ನಾಗಕರಿಕರನ್ನಾಗಿ ಸೃಷ್ಟಿಸುವುದು ಪ್ರತಿಯೊಬ್ಬರ ನಾಗರಿಕರ ಆದ್ಯ ಕರ್ತವ್ಯವಾಗಿದೆ ಎಂದು ಕರ್ನಾಟಕ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿ ಜಯಂತ್ ಬ್ಯಾನರ್ಜಿ ಹೇಳಿದ್ದಾರೆ. ಅವರು ಬೆಳಗಾವಿಯಂದು ಆಯೋಜಿಸಲಾಗಿದ್ದ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಕಾರ್ಯಕ್ರಮವನ್ನು ವರ್ಚುವಲ್ ಆಗಿ ಉದ್ಘಾಟಿಸಿ ಮಾತನಾಡಿದರು. ಮಕ್ಕಳಲ್ಲಿ ಸರಿ ತಪ್ಪುಗಳ ಬಗ್ಗೆ ಸೂಕ್ತ ತಿಳಿವಳಿಕೆ ಮೂಡಿಸಿ ಅನ್ಯಾಯವನ್ನು ಪ್ರತಿರೋಧಿಸುವ ಧೈರ್ಯ ತುಂಬಬೇಕು. ಶೈಕ್ಷಣಿಕ ವಲಯ, ಪೊಲೀಸ್ ವ್ಯವಸ್ಥೆ, ನ್ಯಾಯಾಂಗ ಸೇರಿದಂತೆ ವಿವಿಧ ಇಲಾಖೆಗಳು ಮಕ್ಕಳ ಬದುಕಿನ ಹಕ್ಕುಗಳ ಸಂರಕ್ಷಣೆಯಲ್ಲಿ ನಿಷ್ಠೆಯಿಂದ ಕೆಲಸ ನಿರ್ವಹಿಸಬೇಕು. ಮಕ್ಕಳು ಗುರು ಹಿರಿಯರಿಗೆ ಗೌರವ, ಕಾಯ್ದೆ ಕಾನೂನುಗಳ ತಿಳಿವಳಿಕೆ ಮತ್ತು ಸಾಮಾಜಿಕ ಮೌಲ್ಯಗಳ ಬಗ್ಗೆ ಅರಿವು ಮೂಡಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

<><*<><>*><>

ಹಾಸನದಲ್ಲಿಂದು ಉದ್ಯೋಗ ಮೇಳ ನಡೆಯಿತು. ಸಂಸದ ಶ್ರೇಯಸ್ ಪಟೇಲ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಿರುದ್ಯೋಗಿ ಯುವಕರಿಗೆ ಉದ್ಯೋಗವಾಕಾಶ ಕಲ್ಪಿಸುವ ಉದ್ದೇಶದಿಂದ ಯುವ ಉದ್ಯೋಗಮೇಳ ಆಯೋಜಿಸಲಾಗಿದೆ ಎಂದರು. ೧೫೦ಕ್ಕೂ ಹೆಚ್ಚು ಕಂಪನಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಂಡಿದ್ದು, ೩ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳೂ ನೋಂದಣಿ ಮಾಡಿಕೊಂಡಿದ್ದಾರೆ. ವಿವಿಧ ಕಂಪನಿಗಳಲ್ಲಿ ಖಾಲಿಯಿರುವ ಉದ್ಯೋಗಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ಎಂದು ಅವರು ತಿಳಿಸಿದರು.

<><*<><>*><>

ಕೋಲಾರ ಜಿಲ್ಲೆಯಲ್ಲಿ ಬೇಸಿಗೆ ಮುಂಜಾಗ್ರತೆಯಾಗಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಎಚ್ಚರ ವಹಿಸಲು  ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ ಬಾಗೇವಾಡಿ ಸೂಚಿಸಿದ್ದಾರೆ. ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಇಂದು ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು ೧ ಸಾವಿರದ ೨೫೯ ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಈ ಪೈಕಿ ೧ ಸಾವಿರದ ೧೦೩ ಘಟಕಗಳು ಸುಸ್ಥಿತಿಯಲ್ಲಿವೆ ಮತ್ತು ೧೩೬ ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ. ಈ ಘಟಕಗಳನ್ನು ತಕ್ಷಣವೇ ದುರಸ್ತಿಗೊಳಿಸಿ ಸಾರ್ವಜನಿಕರಿಗೆ ನೀರು ಪೂರೈಸಬೇಕು ಎಂದು ಅಧಿಕಾರಿಗಳಿಗೆ ಆದೇಶಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ 'ಕುಡಿಯುವ ನೀರಿನ ಸಮಸ್ಯೆ, ನಿರ್ವಹಣೆ' ಸಭೆಯಲ್ಲಿ ಅವರು ಮಾತನಾಡಿದರು. ಜಿಲ್ಲೆಯಾದ್ಯಂತ ಮುಂದಿನ ದಿನಗಳಲ್ಲಿ ತೀವ್ರ ನೀರಿನ ಸಮಸ್ಯೆ ಎದುರಿಸುವ ಗ್ರಾಮಗಳ ಪಟ್ಟಿ ಮಾಡಲಾಗಿದ್ದು, ಇದರಲ್ಲಿ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ೧೬ ಗ್ರಾಮ ಪಂಚಾಯತಿಯಲ್ಲಿ ೨೪ ಗ್ರಾಮ, ಕೊಟ್ಟೂರು ತಾಲ್ಲೂಕಿನ ೫ ಗ್ರಾಮ ಪಂಚಾಯತಿಯಲ್ಲಿ ೫೮, ಹರಪನಹಳ್ಳಿ ತಾಲ್ಲೂಕಿನ ೩೨ ಗ್ರಾಮ ಪಂಚಾಯತಿಗಳಲ್ಲಿ ೫೮, ಹೊಸಪೇಟೆ ತಾಲ್ಲೂಕಿನ ೧೩ ಗ್ರಾಮ ಪಂಚಾಯತಿಗಳ ಪೈಕಿ ೧೯, ಕೂಡ್ಲಿಗಿ ತಾಲ್ಲೂಕಿನ ೧೯ ಗ್ರಾಮ ಪಂಚಾಯಿತಿಯ ೨೪ ಗ್ರಾಮಗಳಲ್ಲಿ ತೀವ್ರ ಕುಡಿಯುವ ನೀರಿನ ಬರ ಎದುರಿಸಲಿರುವ ಗ್ರಾಮಗಳು ಎಂದು ಗುರುತಿಸಲಾಗಿದೆ ಎಂದರು.

<><*<><>*><>

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ತುಮಕೂರಿನ ಲಿಂಗಾಪುರದಲ್ಲಿ ನಾಳೆ ಕ್ರೀಡಾಕೂಟ ಮತ್ತು ನಾಡಿದ್ದು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಅಕ್ಷಯ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಯತೀಶ್ ತಿಳಿಸಿದ್ದಾರೆ. ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಮೈ ಭಾರತ್-ಮೇರಾ ಯುವ ಭಾರತ್ ತುಮಕೂರು, ಅಕ್ಷಯ ತಾಂತ್ರಿಕ ಮಹಾವಿದ್ಯಾಲಯ  ಸಹಯೋಗದಲ್ಲಿ ವಿವಿಧ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕೇಂದ್ರ ಸರಕಾರದ  ಖೇಲೋ ಇಂಡಿಯಾ ಕ್ರೀಡಾಕೂಟದ ಅಂಗವಾಗಿ ಕರ್ನಾಟಕದ ೬ ಜಿಲ್ಲೆಗಳಲ್ಲಿ ಈ ಕ್ರೀಡಾಕೂಟ ನಡೆಯುತ್ತಿದ್ದು, ಇದರಲ್ಲಿ ತುಮಕೂರು ಸಹ ಒಂದಾಗಿದೆ ಎಂದು ವಿವರಿಸಿದರು. ಮಹಿಳೆಯರಲ್ಲಿ ಕ್ರೀಡಾ ಮನೋಭಾವನೆಯನ್ನು ಉದ್ದೀಪನಗೊಳಿಸುವ ಸಲುವಾಗಿ ಕೇಂದ್ರ ಯುವ ವ್ಯವಹಾರ ಹಾಗೂ ಕ್ರೀಡಾಸಚಿವಾಲಯದ ಸಹಕಾರದಿಂದ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ಕ್ರೀಡಾಕೂಟದಲ್ಲಿ ಮೂರು ವಿಭಾಗಗಳಲ್ಲಿ ಆಟೋಟ ಸ್ಪರ್ಧೆ ಹಾಗೂ ಫ್ಯಾಷನ್ ಶೋಗಳನ್ನು ಆಯೋಜಿಸಲಾಗಿದೆ.

<><*<><>*><>

ಕಲಬುರಗಿಯಲ್ಲಿ ನಡೆಯುತ್ತಿರುವ ಐಟಿಎಫ್ ಡಬ್ಲ್ಯು-೩೫ ಮಹಿಳಾ ಟೆನಿಸ್ ಟೂರ್ನಿಯಲ್ಲಿಂದು ನಡೆದ ಮಹಿಳಾ ಡಬಲ್ಸ್ ವಿಭಾಗದ ಫೈನಲ್‌ನಲ್ಲಿ ವೈಷ್ಣವಿ ಅಡ್ಕರ್ ಮತ್ತು ಅಂಕಿತಾ ರೈನಾ ಜೋಡಿ ಗೆಲುವು ಸಾಧಿಸಿ ಪ್ರಶಸ್ತಿ ತಮ್ಮದಾಗಿಸಿಕೊಂಡಿವೆ. ಈ ಜೋಡಿ ಕರ್ನಾಟಕದ, ಸೋಹಾ ಸಾದಿಕ್ ಮತ್ತು

ಆಕಾಂಕ್ಷಾ ದಿಲೀಪ ನಿಟ್ಟೂರು ಜೋಡಿಯನ್ನು ೨-೦ ಅಂತರದಿಂದ ಪರಾಭವಗೊಳಿಸಿತು. ಸಿಂಗಲ್ಸ್ ವಿಭಾಗದಲ್ಲಿ ವೈಷ್ಣವಿ ಅಡ್ಕರ್ ಹಾಗೂ ಅಂಕಿತಾ ರೈನಾ ಫೈನಲ್ಸ್ ಪ್ರವೇಶಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರ ೭.೩೫ ಕ್ಕೆ <>*><>**